**ನಿರ್ದೇಶಕರ ಕಛೇರಿ**
**ಅಲ್ಪಸಂಖ್ಯಾತರ ನಿರ್ದೇಶನಾಲಯ**

**ಕರ್ನಾಟಕ ಸರ್ಕಾರ**

**ಮೌಲಾನಾ ಅಬುಲ್ ಕಲಾಂ ಆಜಾದ್ ಭವನ**
#16 ಸಿ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ,
ವಸಂತ ನಗರ, ಬೆಂಗಳೂರು-52
ದೂರವಾಣಿ:080-22864212.
Email:directorgokdom@gmail.com
Web: www.dom.karnataka.gov.in

ಸಂಖ್ಯೆ: ಅ.ಸಂ. ನಿ/ಶಿ.ವಿ/ಪ.ಪೂ/ಸಿಆರ್-30/2025-26 ದಿನಾಂಕ: 02.05.2025

**-: ಸುತ್ತೋಲೆ: -**

**ಗೆ,**

**ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು/ಪ್ರಾಂಶುಪಾಲರು-ಪದವಿ ಪೂರ್ವ ಕಾಲೇಜುಗಳು**
**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ**

ವಿಷಯ:- ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಪದವಿ ಪೂರ್ವ ಕಾಲೇಜುಗಳು ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿನ 2025-26 ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿ.ಯು.ಸಿ ತರಗತಿಗೆ ಉಚಿತ ಪ್ರವೇಶಾತಿಗಾಗಿ ಅರ್ಜಿ ಅಹ್ವಾನಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ರಾಜ್ಯ ಪಠ್ಯಕ್ರಮದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು / ಇಂಟಿಗ್ರೇಟೆಡ್ (ಉನ್ನತೀಕರಣಗೊಂಡ) ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳು, ಡಾ।। ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತವೆ.

ಈ ಶಾಲಾ/ಕಾಲೇಜುಗಳಿಗೆ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತರು , ಸಿಖ್ಖರು, ಜೈನರು , ಭೌಧರು ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದ ಹಾಗೂ ಪ.ಜಾತಿ , ಪ.ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ಎಸ್. ಎಸ್. ಎಲ್.ಸಿ/ತತ್ಸಮಾನ ಪರೀಕ್ಷೆ ತೇರ್ಗಡೆಯಾದ ವಿದ್ಯಾರ್ಥಿಗಳು ಪ್ರಥಮ ಪಿ.ಯು.ಸಿ ತರಗತಿಗೆ ಉಚಿತ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಆದುದರಿಂದ , ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು / ಇಂಟಿಗ್ರೇಟೆಡ್ (ಉನ್ನತೀಕರಣಗೊಂಡ) ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳು, ಡಾ|| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಶೇಕಡಾ 100 ರಷ್ಟು ದಾಖಲಾತಿ ಹೊಂದಲು ವ್ಯಾಪಕ ಪ್ರಚಾರ ಮತ್ತು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಈ ಮೂಲಕ ಸೂಚಿಸಿದೆ.

ಪು.ತಿ.ನೋ

2025-26 ನೇ ಸಾಲಿನ ಪ್ರಥಮ ಪಿ.ಯು.ಸಿ ದಾಖಲಾತಿ ಪ್ರಕ್ರಿಯೆಯ ತಾತ್ಕಾಲಿಕ ವೇಳಾಪಟ್ಟಿ:-

| | |
|---|---|
| ವಿದ್ಯಾರ್ಥಿಗಳಿಂದ ಪ್ರಥಮ ಪಿ.ಯು.ಸಿ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 03.05.2025 |
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ | 17.05.2025 |
| ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು ಅರ್ಜಿಗಳನ್ನು ಪರಿಶೀಲಿಸಲು ಅಂತಿಮ ದಿನಾಂಕ | 20.05.2025 |
| ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು ಅರ್ಜಿಗಳನ್ನು ಅನುಮೋದಿಸುವ ಅಂತಿಮ ದಿನಾಂಕ | 23.05.2025 |
| ಸ್ವೀಕೃತ ಅರ್ಜಿಗಳ ಪರಿಶೀಲನೆಯ ಕೊನೆಯ ದಿನಾಂಕ (ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ) | 26.05.2025 |
| ಮೊದಲ ಸುತ್ತಿನ ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ (ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ) | 27.05.2025 |
| ಮೊದಲ ಸುತ್ತಿನ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಕಾಲೇಜಿಗೆ ಮೂಲ ದಾಖಲೆಗಳೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಂಕ | 28.05.2025 ರಿಂದ 31.05.2025 ರವರೆಗೆ |
| ಮೊದಲ ಸುತ್ತಿನ ಆಯ್ಕೆ ಪ್ರಕ್ರಿಯೆಯಲ್ಲಿ ಉಳಿಕೆ ಸೀಟುಗಳ ಮತ್ತು ಮೊದಲ ಸುತ್ತಿನ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿ ದಾಖಲಾತಿ ಪಡೆದ ವಿದ್ಯಾರ್ಥಿಗಳ ಮಾಹಿತಿಯನ್ನು ಸಂಬಂಧಪಟ್ಟ ಪ್ರಾಂಶುಪಾಲರು ನಿರ್ದೇಶನಾಲಯಕ್ಕೆ ನೀಡುವ ದಿನಾಂಕ | 31.05.2025 (ಸಂಜೆ 5:00 ಗಂಟೆಯ ಒಳಗೆ) |
| ಎರಡನೇ ಸುತ್ತಿನ ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ (ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ) | 02.06.2025 |
| ಎರಡನೇ ಸುತ್ತಿನ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಕಾಲೇಜಿಗೆ ಮೂಲ ದಾಖಲೆಗಳೊಂದಿಗೆ ಪ್ರವೇಶ ಪಡೆಯಲು ಕೊನೆಯವ ದಿನಾಂಕ | 04.06.2025 |

**ಆನ್‌ಲೈನ್ ಅರ್ಜಿ ಸಲ್ಲಿಸಲು ಸೇವಾಸಿಂಧು ಜಾಲತಾಣದ ವಿಳಾಸ:-**
https://sevasindhuservices.karnataka.gov.in

**ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ:- 03.05.2025**

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:- 17.05.2025**

ವಿಶೇಷ ಸೂಚನೆ: -

1. ನಿರ್ದೇಶನಾಲಯದವತಿಯಿಂದ ಹೊರಡಿಸಲಾಗಿರುವ ಪ್ರಥಮ ಪಿ.ಯು.ಸಿ ತರಗತಿ ಮಾರ್ಗಸೂಚಿಯನ್ನು ಕಡ್ಡಾಯವಾಗಿ ನಿರ್ವಹಿಸುವುದು.
2. ಪದವಿ ಪೂರ್ವ ಶಿಕ್ಷಣ ಇಲಾಖೆಯು ಹೊರಡಿಸಿರುವ 2025-26 ನೇ ಸಾಲಿನ ಶೈಕ್ಷಣಿಕ ಮಾರ್ಗಸೂಚಿಯಂತೆ ನಿಯಮಾನುಸಾರ ದಾಖಲಾತಿಯನ್ನು ಕೈಗೊಳ್ಳುವುದು.

**ನಿರ್ದೇಶಕರು**
**ಅಲ್ಪಸಂಖ್ಯಾತರ ನಿರ್ದೇಶನಾಲಯ**
**ಬೆಂಗಳೂರು**

ಪ್ರತಿಯನ್ನು : –

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ,ಬೆಂಗಳೂರು – ಇವರ ಗೌರವ ಪೂರ್ವ ಮಾಹಿತಿಗಾಗಿ ಸಲ್ಲಿಸಿದೆ.
2. ಎಲ್ಲಾ ಪ್ರಂಶುಪಾಲರು ಹಾಗೂ ಮುಖ್ಯೋಪಾಧ್ಯಾಯರುಗಳು - ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳು / ಇಂಟಿಗ್ರೇಟೆಡ್ (ಉನ್ನತೀಕರಣಗೊಂಡ) ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳು, ಡಾ|| ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ/ ಪದವಿ ಪೂರ್ವ ಕಾಲೇಜುಗಳು ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳು ಇವರ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.